ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಖಜಾನೆಗಳಲ್ಲಿ ವರ್ಷಾಂತ್ಯದ ಬಿಲ್ಲುಗಳನ್ನು ಮಾರ್ಚ್ 31ರಂದೇ ತೀರ್ಣಗೊಳಿಸಿ ಲೆಕ್ಕವನ್ನು ಮುಕ್ತಾಯಗೊಳಿಸುವ ಬಗ್ಗೆ.

ಓದಲಾಗಿದೆ : 1. ಸರ್ಕಾರಿ ಆದೇಶ ಸಂಖ್ಯೆ :ಆಇ 02 ಬಿಪಿಇ 2017, ದಿನಾಂಕ:21-01-2017.
2. ನಿರ್ದೇಶಕರು, ಖಜಾನೆ ಇಲಾಖೆ ಇವರ ಪತ್ರ ಸಂಖ್ಯೆ: ಖ.ನಿ. ಪ್ರಕ್ರಿಯೆ/73/2016-17, ದಿನಾಂಕ: 14-12-2017.

* * * * *

ಪ್ರಸ್ತಾವನೆ :

2016-17ನೇ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಖಜಾನೆಗಳಲ್ಲಿ ಸ್ವೀಕರಿಸಿ ತೀರ್ಣಗೊಳಿಸಿ ದಿನಾಂಕ: 31-3-2017ರಂದೇ 2016-17ನೇ ಸಾಲಿನ ಲೆಕ್ಕಗಳನ್ನು ಮುಕ್ತಾಯಗೊಳಿಸಲು ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿ ಕಾಲಮಿತಿ ಸೂಚಿಸಿ ವೇಳಾಪಟ್ಟಿಯನ್ನು ನಿಗಧಿಪಡಿಸಲಾಗಿತ್ತು. ಸದರಿ ವೇಳಾಪಟ್ಟಿಯಂತೆ ಇಲಾಖಾ ಅಧಿಕಾರಿಗಳು ಹಾಗೂ ಖಜಾನಾಧಿಕಾರಿಗಳು ಸೂಕ್ತ ಕ್ರಮ ಕೈಗೊಂಡಿದ್ದು ಯೋಜನೆಯನ್ನು ಯಶಸ್ವಿಯಾಗಿ ನಿರ್ವಹಿಸಲಾಗಿದೆ.

2017-18ನೇ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಸಹ ಖಜಾನೆಗಳಲ್ಲಿ ಸ್ವೀಕರಿಸಿ ತೀರ್ಣಗೊಳಿಸಿ ದಿನಾಂಕ:31-3-2018ರಂದೇ 2017-18ನೇ ಸಾಲಿನ ಲೆಕ್ಕಗಳನ್ನು ಮುಕ್ತಾಯಗೊಳಿಸಲು ಸೂಕ್ತ ವೇಳಾಪಟ್ಟಿಯನ್ನು ನೀಡಿ ಸಾಕಷ್ಟು ಮುಂಚಿತವಾಗಿ ಆದೇಶವನ್ನು ಹೊರಡಿಸುವುದು ಅವಶ್ಯವಿದೆಯೆಂದು ಖಜಾನೆ ನಿರ್ದೇಶಕರು ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರವನ್ನು ಕೋರಿದ್ದಾರೆ. ಆದ್ದರಿಂದ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ : ಆಇ 16 ಬಿಪಿಇ 2017, ಬೆಂಗಳೂರು, ದಿನಾಂಕ:11-01-2018**

**ಎ) ಆಡಳಿತ ಇಲಾಖೆಗಳ ಬಿಲ್ಲುಗಳನ್ನು ಖಜಾನೆಗೆ ಸಲ್ಲಿಸಲು ನಿಗದಿಗೊಳಿಸಿರುವ ಕಾಲಮಿತಿ.**

| ಕ್ರ ಸಂ: | ಬಿಲ್ಲುಗಳ ಸ್ವರೂಪ/ವಿವರಗಳು | 31-01-2018ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ upload ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ | 31-01-2018ರ ನಂತರ ಬಿಡುಗಡೆ ಮಾಡುವ ಹಾಗೂ ಆಗುವ ವೆಚ್ಚಗಳಿಗೆ ಸಂಬಂಧಿಸಿದಂತೆ | |
|---|---|---|---|---|
| | | | ಹಣ ಬಿಡುಗಡೆ/ upload ಮಾಡಲು ಕಡೆಯ ದಿನಾಂಕ | ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ |
| 1 | 2 | 3 | 4 | 5 |
| 1 | ವೇತನ/ವೇತನ ಬಾಕಿ ಬಿಲ್ಲುಗಳು/ಸಹಾಯಾನುದಾನ-ವೇತನ ಬಿಲ್ಲುಗಳು | 17.02.2018 | 12.03.2018 | 15.03.2018 |

| ಕ್ರ ಸಂ: | ಬಿಲ್ಲುಗಳ ಸ್ವರೂಪ/ವಿವರಗಳು | 31-01-2018ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ upload ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ | 31-01-2018ರ ನಂತರ ಬಿಡುಗಡೆ ಮಾಡುವ ಹಾಗೂ ಆಗುವ ವೆಚ್ಚಗಳಿಗೆ ಸಂಬಂಧಿಸಿದಂತೆ | |
|---|---|---|---|---|
| | | | ಹಣ ಬಿಡುಗಡೆ/ upload ಮಾಡಲು ಕಡೆಯ ದಿನಾಂಕ | ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ |
| 1 | 2 | 3 | 4 | 5 |
| 2 | ಹಬ್ಬದ ಮುಂಗಡ ಬಿಲ್ಲು | --- | | 8.03.2018 |
| 3 | ಕಛೇರಿ ವೆಚ್ಚಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು/ಪ್ರಯಾಣ ಭತ್ಯೆ ಬಿಲ್ಲುಗಳು | 17.02.2018 | 05.03.2018 | 12.03.2018 |
| 4 | EAP, ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನೆ ಹೊರತುಪಡಿಸಿ ಇತರೆ ಯೋಜನೆಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು ಹಾಗೂ ವೇತನೇತರ ಸಹಾಯಾನುದಾನ ಬಿಲ್ಲುಗಳು | 20.02.2018 | 15.03.2018 | 20.03.2018 |
| 5 | ಸಂಕ್ಷಿಪ್ತ ಸಾದಿಲ್ವಾರು ಬಿಲ್ಲುಗಳು ಹಾಗೂ EAP, ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನೆ ಬಿಲ್ಲುಗಳು | 15.03.2018 | | 15.03.2018 |
| 6 | ಏಪ್ರಿಲ್ ತಿಂಗಳಲ್ಲಿ ಪಾವತಿಯಾಗುವ ಮಾರ್ಚ್ ತಿಂಗಳ ವೇತನ/ವೇತನ ಅನುದಾನಿತ ಬಿಲ್ಲುಗಳು | ---- | 02.04.2018 ರ ನಂತರ | |
| 7 | ಇಲಾಖೆಗಳು ಹಾಗೂ ಸಚಿವಾಲಯದ ಆಡಳಿತ ಇಲಾಖೆಗಳು ಹೊರಡಿಸುವ ಪುನರ್ವಿನಿಯೋಗದ ಬಿಲ್ಲುಗಳು | --- | 12.03.2018 | |

| ಕ್ರ ಸಂ: | ಬಿಲ್ಲುಗಳ ಸ್ವರೂಪ/ವಿವರಗಳು | **31-01-2018ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ upload ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ** | **31-01-2018ರ ನಂತರ ಬಿಡುಗಡೆ ಮಾಡುವ ಹಾಗೂ ಆಗುವ ವೆಚ್ಚಗಳಿಗೆ ಸಂಬಂಧಿಸಿದಂತೆ** | |
|---|---|---|---|---|
| | | | **ಹಣ ಬಿಡುಗಡೆ/ upload ಮಾಡಲು ಕಡೆಯ ದಿನಾಂಕ** | **ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ** |
| **1** | **2** | **3** | **4** | **5** |
| 8 | ವಿದ್ಯುಚ್ಛಕ್ತಿ, ದೂರವಾಣಿ ಹಾಗೂ ಕಟ್ಟಡ ಬಾಡಿಗೆಗೆ ಸಂಬಂಧಿಸಿದ ಬಿಲ್ಲುಗಳು | ---- | | 16-03-2018 |
| 9 | ಪೂರಕ ಅಂದಾಜು-3 ರಲ್ಲಿ ಸಕ್ರಮಗೊಳಿಸುವ ಹೆಚ್ಚುವರಿ ಆದೇಶದ ಬಿಲ್ಲುಗಳು | ---- | 12.03.2018 | 20.03.2018 |
| 10 | ಪೂರಕ ಅಂದಾಜು-3 ರಲ್ಲಿ ಒದಗಿಸಿರುವ ಅನುದಾನದ ಬಿಲ್ಲುಗಳು | ---- | 15.03.2018 | 24.03.2018 |
| 11 | ZP/TP ಗೆ ಸಂಬಂಧಿಸಿದ ಎಲ್ಲಾ upload ಗಳು | ---- | 12.03.2018 | |

**ಬಿ) ಆಡಳಿತ ಇಲಾಖೆಗಳಿಗೆ ಸೂಚನೆಗಳು**

1. ದಿನಾಂಕ:**31-03-2018ರ ಅಪರಾಹ್ನ 2.30** ಘಂಟೆಯ ನಂತರ ಯಾವುದೇ ಬಿಲ್ಲುಗಳನ್ನು ಖಜಾನೆಗಳಿಗೆ ಸಲ್ಲಿಸುವುದನ್ನು ನಿರ್ಬಂಧಿಸಲಾಗಿದೆ.

2. ಇಲಾಖಾ ಮುಖ್ಯಸ್ಥರು ಮತ್ತು ಅವರುಗಳ ಹಣ ಪಡೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳು ಈ ಆದೇಶದಲ್ಲಿ ತಿಳಿಸಿರುವ ವೇಳಾ ಪಟ್ಟಿಯಂತೆ ಕ್ರಮ ಕೈಗೊಳ್ಳತಕ್ಕದ್ದು ಮತ್ತು ಆರ್ಥಿಕ ಮಿತವ್ಯಯ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

3. ಸರ್ಕಾರದ ಆದೇಶ ಸಂಖ್ಯೆ: **ಆಇ 2 ಟಿಎಫ್‌ಪಿ 2004**, ದಿನಾಂಕ: **09-09-2004**ರಲ್ಲಿ ತಿಳಿಸಿರುವ ಸೂಚನೆಗಳನ್ನು ಸಹ ಗಮನದಲ್ಲಿಟ್ಟುಕೊಂಡು ಮೇಲೆ ಹೇಳಿರುವ ಅಂಶಗಳನ್ನು ಗಣನೆಗೆ

ತೆಗೆದುಕೊಂಡು ಆಯವ್ಯಯದಲ್ಲಿ ನಿಗದಿ ಪಡಿಸಿರುವ ಮೊತ್ತವನ್ನು ದಿನಾಂಕ 31-03-2018ರೊಳಗೆ ವೆಚ್ಚ ಮಾಡತಕ್ಕದ್ದು.

4. ಕ್ರಮ ಸಂಖ್ಯೆ-4ಕ್ಕೆ ಸಂಬಂಧಿಸಿದಂತೆ ಕಾಲೇಜು ಶಿಕ್ಷಣ, ತಾಂತ್ರಿಕ ಶಿಕ್ಷಣ, ಪದವಿ ಪೂರ್ವ ಶಿಕ್ಷಣ, ಅಂಗವಿಕಲರ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ವಿದ್ಯಾರ್ಥಿವೇತನದ ಫಲಾನುಭವಿಗಳ ಪಟ್ಟಿಯನ್ನು ಸಾಕಷ್ಟು ಮುಂಚಿತವಾಗಿ ಡಿಡಿಓ ಗಳು ತಯಾರಿಸತಕ್ಕದ್ದು.

5. ಖಜಾನೆ-2 ರಲ್ಲಿ ಬಿಲ್ಲುಗಳನ್ನು ಸಲ್ಲಿಸುವ ಹಣ ಸೆಳೆಯುವ ಬಟವಾಡೆ ಅಧಿಕಾರಿಗಳು ಮೇಲೆ ಉಲ್ಲೇಖಿಸಿದ ದಿನಾಂಕದೊಳಗೆ ಆನ್‌ಲೈನ್‌ನಲ್ಲಿ ಮತ್ತು ಭೌತಿಕವಾಗಿ ಬಿಲ್ಲುಗಳನ್ನು ಸಲ್ಲಿಸತಕ್ಕದ್ದು.

ಸಿ) <u>ಖಜಾನೆಗಳಿಗೆ ಸೂಚನೆಗಳು</u>

1. ಎಲ್ಲಾ ಖಜಾನೆಗಳಲ್ಲಿ ಲೆಕ್ಕಗಳನ್ನು ಅಂತಿಮಗೊಳಿಸಲು ಅನುಕೂಲವಾಗುವಂತೆ ದಿನಾಂಕ:**02-04-2018ನ್ನು** ವ್ಯವಹಾರ ರಹಿತ ದಿನವನ್ನಾಗಿ ಘೋಷಿಸಲಾಗಿದೆ.

2. ಖಜಾನೆಗಳು ಮಾರ್ಚ್ **2018**ರ ಲೆಕ್ಕಗಳನ್ನು **31ನೇ ಮಾರ್ಚ್ 2018**ರ ನಂತರವೂ ತೆರೆದಿರಕೂಡದೆಂದು ಸೂಚಿಸಲಾಗಿದೆ.

3. ಮಹಾಲೇಖಪಾಲರು (ಎ ಮತ್ತು ಇ)ರವರು 2017-18ರ ತಾತ್ಕಾಲಿಕ ಲೆಕ್ಕಗಳನ್ನು 10ನೇ ಮೇ 2018ರೊಳಗಾಗಿ ಸರ್ಕಾರಕ್ಕೆ ಕಳುಹಿಸಲು ಅನುವಾಗುವಂತೆ ಖಜಾನಾಧಿಕಾರಿಗಳು ನಿಗದಿತ ಸಮಯದೊಳಗೆ ಮಹಾಲೇಖಪಾಲರಿಗೆ ಮಾರ್ಚ್ 2018ರ ಲೆಕ್ಕಗಳನ್ನು ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪಿ. ಸಿಂಧು)
ಸರ್ಕಾರದ ಉಪ ಕಾರ್ಯದರ್ಶಿ
(ಆಯವ್ಯಯ & ಸಂಪನ್ಮೂಲ)
ಆರ್ಥಿಕ ಇಲಾಖೆ

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ:44:ಆಯವ್ಯಯ;ಸುತ್ತೋಲೆ:2016-17

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ22.01.2018.

ಮೇಲ್ಕಂಡ ಸರ್ಕಾರದ ಆದೇಶವನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಪರಿಚಲಿಸಲಾಗಿದೆ. ಸದರಿ ಆದೇಶದಂತೆ ಕೂಡಲೇ ನಿಯಮಾನುಸಾರ ಕ್ರಮವಹಿಸಲು ಸೂಚಿಸಲಾದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ,

1) ಕೇಂದ್ರ ಕಛೇರಿ ಹಾಗೂ ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮಂಗಳೂರು, ಮೈಸೂರು, ಧಾರವಾಡ ಶಿವಮೊಗ್ಗ ಮತ್ತು ಕಲಬುರಗಿ
2) ಈ ಕಛೇರಿ ವ್ಯಾಪ್ತಿಯಡಿಯಲ್ಲಿ ಬರುವ ಯೋಜನೆ/ಯೋಜನೇತರ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ

ಪ್ರತಿಯನ್ನು

1) ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು(ವೆಬ್‌ಸೈಟ್‌ನಲ್ಲಿ ಅಳವಡಿಸಲು)
2) ಕಛೇರಿ ಪ್ರತಿ

Circular.Docx